ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 21–10–2014

ಪತ್ರಿಕಾ ಪ್ರಕಟಣೆ

## ದೀಪಾವಳಿ : ರಾಜ್ಯದ ಜನತೆಗೆ ಮುಖ್ಯಮಂತ್ರಿ ಶುಭಾಶಯ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ) :

ಬೆಳಕಿನ ಹಬ್ಬ ದೀಪಾವಳಿಯ ಸಂದರ್ಭದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ರಾಜ್ಯದ ಜನತೆಗೆ ಶುಭ ಹಾರೈಸಿದ್ದಾರೆ.

ದೀಪಾವಳಿಯು ನಮ್ಮನ್ನು ಅಜ್ಞಾನದಿಂದ ಜ್ಞಾನದೆಡೆಗೆ, ಮೌಢ್ಯದಿಂದ ವೈಚಾರಿಕತೆಯೆಡೆಗೆ, ಕ್ರೌರ್ಯದಿಂದ ಮಾನವೀಯತೆಯಡೆಗೆ ಹಾಗೂ ಕತ್ತಲಿನಿಂದ ಬೆಳಕಿನೆಡೆಗೆ ಕೊಂಡೊಯ್ಯಲಿ. ಮಕ್ಕಳು, ಮಹಿಳೆಯರು, ವೃದ್ಧರು ಮತ್ತು ರೋಗಿಗಳನ್ನು ಘಾಸಿಗೊಳಿಸುವ ಹಾಗೂ ವಾಯು ಮಾಲಿನ್ಯ ಮತ್ತು ಶಬ್ದ ಮಾಲಿನ್ಯಕ್ಕೆ ಕಾರಣವಾಗುವ ಪಟಾಕಿಗಳ ಬಳಕೆ ಕಡಿಮೆಯಾಗಲಿ. ನಾಡಿನೆಲ್ಲೆಡೆ ಅಭಿವೃದ್ಧಿ ಮತ್ತು ಸಮೃದ್ಧಿ ಪಸರಿಸಲಿ ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

*************

ಡಿ ಪಿ ಎಂ

ಮುಖ್ಯ ಸಚೇತಕರ ಪ್ರವಾಸ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನಸಭೆಯ ಸರ್ಕಾರಿ ಮುಖ್ಯ ಸಚೇತಕ ಶ್ರೀ ಅಶೋಕ ಮಹಾದೇವಪ್ಪ ಪಟ್ಟಣ್ ಅವರು ಅಕ್ಟೋಬರ್ 23 ರಿಂದ 26 ರವರೆಗೆ ಬೆಳಗಾವಿ ಜಿಲ್ಲೆಯಲ್ಲಿ ಪ್ರವಾಸ ಮಾಡುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

ಸಮ:ಬಾಬು:ಜಿಪಿಆರ್.

## ಅಮಾನತು

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ರಾಯಚೂರಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯ ರೇಖಾಗಾರರಾದ ಶ್ರೀ ಎನ್. ಬಾಲಾಜಿ ರಾವ್ ಅವರನ್ನು ಸರ್ಕಾರಿ ಕರ್ತವ್ಯ ನಿರ್ವಹಣೆಯಲ್ಲಿ ಲೋಪ ಎಸಗಿರುವ ಆರೋಪಗಳಡಿಯಲ್ಲಿ ಇವರ ವಿರುದ್ಧ ಇರುವ ಆರೋಪಗಳ ಬಗ್ಗೆ ವಿಚಾರಣೆ ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತುಗೊಳಿಸಿ ಕೃಷಿ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ಸಮ:ಬಾಬು:ಜಿಪಿಆರ್.

## ಮುಖ್ಯಮಂತ್ರಿಗಳ ವಾರ್ಷಿಕ ರತ್ನ ಪ್ರಶಸ್ತಿ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ಮೈಸೂರು ಮಿನರಲ್ಸ್ ಸಂಸ್ಥೆಯ ಗಣಿಗಾರಿಕೆಯಲ್ಲಿ ತೊಡಗಿರುವ ಕರ್ನಾಟಕ ಸರ್ಕಾರದ ಒಂದು ಉನ್ನತ ಸಾರ್ವಜನಿಕ ಉದ್ಯಮವಾಗಿದ್ದು, ಗಣಿಗಾರಿಕಾ ಕ್ಷೇತ್ರದಲಿ ಉತ್ತಮ ಸಾಧನೆಗಾಗಿ 201–11 ನೇ ಸಾಲಿಗೆ “ಮಾನ್ಯ ಮುಖ್ಯಮಂತ್ರಿಗಳ ವಾರ್ಷಿಕ ರತ್ನ ಪ್ರಶಸ್ತಿ” ಪಡೆದಿರುತ್ತದೆ.  2004–05 ನೇ ಸಾಲಿನಿಂದ ಸತತವಾಗಿ ಲಾಭ ಗಳಿಸುತ್ತಿದ್ದು, 2013–14 ನೇ ಸಾಲಿನಲ್ಲಿ ರೂ. 473.37 ಕೋಟಿ ವಹಿವಾಟು ನಡೆಸಿ, ರೂ 313.35 ಕೋಟಿ ತೆರಿಗೆ ಪೂರ್ವ ಲಾಭ ಮತ್ತು ರೂ 196.92 ಕೋಟಿ ತೆರಿಗೆ ನಂತರದ ಲಾಭ ಗಳಿಸಿದೆ.

ದಿನಾಂಕ 26–09–2014 ರಂದು ನಡೆದ 48ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಸಂಸ್ಥೆಯ ಶೇರುದಾರರಿಗೆ ಶೇ 100 ರಷ್ಟು ಲಾಭಾಂಶವನ್ನು ಒಪ್ಪಿದೆ.

ಈ ನಿಟ್ಟಿನಲ್ಲಿ ಮೈಸೂರಿನ ಮಿನರಲ್ಸ್ ಲಿಮಿಟೆಡ್‌ನ ಅಧ್ಯಕ್ಷರೂ ಆದ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಕಾರ್ಯದರ್ಶಿ ಶ್ರೀ ತುಷಾರ ಗಿರಿನಾಥ್ ಅವರು ಮುಖ್ಯಮಂತ್ರಿಗಳಿಗೆ 5.95 ಕೋಟಿ ರೂ. ಗಳ ಚೆಕ್‌ನ್ನು ಹಸ್ತಾಂತರಿಸಿದರು ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಶ್ರೀ ಎಂ. ಮಹೇಶ್ವರ ರಾವ್ ಅವರು ತಿಳಿಸಿದ್ದಾರೆ.

ಸಮ:ಬಾಬು:ಜಿಪಿಆರ್.

# CM's Annual Ratna Award

**Bangalore, October 21 (Karnataka Information)**

**Mysore Minerals Limited is one of the premier Public Sector Undertakings of the Government of Karnataka in the Mining Sector, MML was awarded the "Chief Minister's Annual Ratna Awarard" for the best achievement in the Mining Sector for the year 2010-11 from the year 2004-05 and onwards, the Company has been continuously recording -profits. The Company has recorded a turnover of Rs 473.37 crores, Profit Before Tax of Rs 313.35 crores and Profit After Tax of Rs 196.92 crores during 2013-14.**

**The Mysore Minerals Limited in its 48th Annual General Meeting held on 26-09-2014 had approved to pay 100% Dividend to the Share Holders of the Company.**

**In this connection, Sri. Tushar Giri Nath, Secretary, Commerce & Industries Department and the Chairman, Mysore Minerals Limited has handed over the cheque of Rs 5.95 Crores towards Dividend to the Chief Minister said to Shri M. Mahaeshwar Rao, Managing Director Mysore Minerals Limited in a press release.**

**sm/babu/gpr.**

# ದೀಪಾವಳಿ ಪಟಾಕಿ ಮುನ್ನೆಚ್ಚರಿಕೆ ಅಗತ್ಯ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

2014 ನೇ ಸಾಲಿನಲ್ಲಿ ದೀಪಾವಳಿ ಹಬ್ಬವನ್ನು ಸುರಕ್ಷಿತವಾಗಿ ಆಚರಿಸುವ ದಿಸೆಯಲ್ಲಿ ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆ ಈ ಕೆಳ ತೋರಿಸಿರುವ ಕ್ರಮ ಕೈಗೊಂಡಿದೆ.

ಜನ ಸಂದಣಿ ಹಾಗೂ ಇಕ್ಕಟ್ಟಾದ ಸ್ಥಳಗಳಲ್ಲಿ ಪಟಾಕಿ ದಾಸ್ತಾನು ಹಾಗೂ ಮಾರಾಟಕ್ಕೆ ನಿರಾಕ್ಷೇಪಣಾ ಪತ್ರ ನೀಡಬಾರದು ಹಾಗೂ ತೆರೆದ ಮೈದಾನಗಳಲ್ಲಿ ಮಾತ್ರ ಪಟಾಕಿ ದಾಸ್ತಾನು ಹಾಗೂ ಮಾರಾಟಕ್ಕೆ ನಿರಾಪೇಕ್ಷಣಾ ಪತ್ರವನ್ನು ಸಂಬಂಧಪಟ್ಟ ಪರವಾನಗಿ ಪ್ರಾಧಿಕಾರಕ್ಕೆ ನೀಡಬೇಕೆಂದು ದಿನಾಂಕ 16-10-2014 ರಂದು ಇಲಾಖೆಯ ಎಲ್ಲಾ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಅಗ್ನಿಶಾಮಕ ಇಲಾಖೆ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಎಲ್ಲಾ ವಾಹನಗಳನ್ನು ಹಾಗೂ ಸಿಬ್ಬಂದಿಗಳನ್ನು ತಯಾರಿಯಲ್ಲಿಟ್ಟಿರಬೇಕು ಎಂದು ತಿಳಿಸಲಾಗಿದೆ.

ಇದಲ್ಲದೆ ದೀಪಾವಳಿ ಹಬ್ಬದ ಸಂದರ್ಭದಲ್ಲಿ ಪಟಾಕಿ ಬಳಸುವಾಗಿ ಸಾರ್ವಜನಿಕರು ಈ ಕೆಳ ತೋರಿಸಿರುವ ಸುರಕ್ಷಿತ ಕ್ರಮಗಳನ್ನು ಪಾಲಿಸಲು ಮನವಿ ಮಾಡಲಾಗಿದೆ.

ಮಕ್ಕಳಿಗೆ ದೊಡ್ಡವರ ಸಮ್ಮುಖದಲ್ಲೇ ಪಟಾಕಿ ಹಚ್ಚಲು ತಿಳಿಸತಕ್ಕದ್ದು. ತೆರೆದ ಪ್ರದೇಶದಲ್ಲಿ ಪಟಾಕಿ ಹಚ್ಚುವುದು ಸುರಕ್ಷಿತ. ಯಾವುದೆ ಸಂದರ್ಭದಲ್ಲಿ ಮನೆಯೊಳಗೆ ಪಟಾಕಿ ಹಚ್ಚಬಾರದು.

ಆದಷ್ಟು ಮಟ್ಟಿಗೆ ಶರೀರಕ್ಕೆ ಹೊಂದಿಕೊಳ್ಳುವಂತಹ ಬಟ್ಟೆಗಳನ್ನು ಧರಿಸತಕ್ಕದ್ದು, ದೊಗಲೆ ಹಾಗೂ ಸಿಂಥೆಟಿಕ್ ಬಟ್ಟೆಗಳನ್ನು ದರಿಸತಕ್ಕದ್ದು. ದೊಗಲೆ ಹಾಗೂ ಸಿಂಥೆಟಿಕ್ ಬಟ್ಟೆಗಳನ್ನು ದರಿಸಬಾರದು.

ಸುರ ಸುರ ಬತ್ತಿ ಇತ್ಯಾದಿಗಳನ್ನು ಶರೀರದ ಆದಷ್ಟು ದೂರ ಹಿಡಿಯಬೇಕು. ಪಟಾಕಿ ಹಚ್ಚುವಾಗಿ ಅದರ ಮೇಲೆ ಬಾಗಬಾರದು. ಸಾಧ್ಯವಾದಷ್ಟು ಮಟ್ಟಿಗೆ ಪಕ್ಕದಿಂದ ಹಚ್ಚತಕ್ಕದ್ದು. ಯಾವುದೇ ಪಾತ್ರೆ ಒಳಗೆ ಅಥವಾ ಇಕ್ಕಟ್ಟಾದ ಸ್ಥಳಗಳಲ್ಲಿ ಪಟಾಕಿ ಹಚ್ಚಬಾರದು. ಯಾವುದೇ ಸಂದರ್ಭದಲ್ಲಿ ಪಟಾಕಿಗಳನ್ನು ಬೆಂಕಿಯ ಅಥವಾ ಉಷ್ಣತೆ ಹೆಚ್ಚಿರುವ ಸ್ಥಳಗಳಲ್ಲಿ ಇಡಬಾರದು ಹಾಗೂ ಪೊಟ್ಟಣಗಳನ್ನು ತೆರೆಯಬಾರದು. ಹಚ್ಚಿರುವ ಪಟಾಕಿ ಸಿಡಿಯದಿದ್ದರೆ ಅದನ್ನು ಪುನರ್ ಪರೀಕ್ಷಿಸಲು ಪ್ರಯತ್ನಿಸಬಾರದು. ಹೂ ಕುಂಡಗಳನ್ನು ಕೈಯಲ್ಲಿ ಹಿಡಿದುಕೊಂಡು ಹಚ್ಚಬಾರದು. ರಾಕೆಟ್ ತರಹದ ಪಟಾಕಿಗಲನ್ನು ಹಚ್ಚುವಾಗ ಯಾವುದೇ ಕಿಟಕಿ, ಬಾಗಿಲು, ತೆರೆದಿರುವ ಕಟ್ಟಡ, ಗುಡಿಸಲು, ಹುಲ್ಲಿನ ಬಣವೆ ಇತ್ಯದಿ ಮೇಲೆ ಬೀಳದಂತೆ ಎಚ್ಚರ ವಹಿಸಬೆಕು. ರಾಕೆಟ್‌ಗಳನ್ನು ಬಳಸುವುದನ್ನು ಪೂರ್ಣವಾಗಿ ತಪ್ಪಿಸುವುದ ಉತ್ತಮ. ಬೇರೆಯವರಿಗೆ ತೋರಿಸಿಕೊಳ್ಳಲು ಪಟಾಕಿ ಹಚ್ಚುವಾಗ ಅಪಾಯಕ್ಕೆ ಅವಕಾಶ ಕೊಡಬಾರದು. ಪಟಾಕಿ ಹಚ್ಚುವಾಗ ಯಾವಾಗಲು ಪಕ್ಕದಲ್ಲಿ ನೀರನನು ಇಟ್ಟುಕೊಳ್ಳುವುದು ಸುರಕ್ಷಿತ. ಆಕಸ್ಮಿಕವಾಗಿ ಸುಟ್ಟ ಗಾಯಗಳಾದರೆ ಕೂಡಲೇ ತಣ್ಣೀರನ್ನು ಸುರಿಯತಕ್ಕದ್ದು. ಸಾಧ್ಯವಾದಷ್ಟು ಮಟ್ಟಿಗೆ ಸ್ನೇಹಿತರ

ಜೊತೆ ಸೇರಿ ಸಾರ್ವಜನಿಕ ತೆರೆದ ಪ್ರದೇಶಗಳಲ್ಲಿ ಪಟಾಕಿ ಹಚ್ಚುವುದು ಸೂಕ್ತ. ಇದರಿಂದ ಎಲ್ಲರೂ ಸಂತೋಷ ಪಡಬಹುದು ಹಾಗೂ ಸುರಕ್ಷಿತ. ಪಟಾಕಿ ಹಚ್ಚುವಾಗ ಮಕ್ಕಳು, ವಯಸ್ಸಾದವರು, ಖಾಯಿಲೆ ಇರುವವರು ಹಾಗೂ ಪ್ರಾಣಿಗಳನ್ನು ಗಮನಿಸಿ ಅವರಿಗೆ ಆಗುವ ತೊಂದರೆಗಳನ್ನು ತಪ್ಪಿಸಲು ಪ್ರಯತ್ನಿಸಿ.

ಯಾವುದೇ ರೀತಿಯ ಅಗ್ನಿಅನಾಹುತಗಳು ಸಂಭವಿಸಿದಿದಲ್ಲಿ ಅಗ್ನಿಶಾಮಕ ಇಲಾಖೆಯ ಫೈರ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ 101 ಹಾಗೂ ಬೆಂಗಳೂರು ನಗರದಲ್ಲಿ ಸಂಭವಿಸಿದಲ್ಲಿ ದೂರವಾಣಿ ಸಂಖ್ಯೆ 101 ಅಥವಾ 080–22971500 ಅಥವಾ 080– 22971600 ಸಂಖ್ಯೆಗೆ ಕರೆ ಮಾಡಿ ಮಾಹಿತಿ ನೀಡಲು ಸಾರ್ವಜನಿಕರಲ್ಲಿ ಕೋರಿದೆ. ಸಾಧ್ಯವಾದಷ್ಟು ಮಟ್ಟಿಗೆ ಹೆಚ್ಚು ಶಬ್ದ ಬರುವ ಪಟಾಕಿಗಳನ್ನು ಆಸ್ಪತ್ರೆ ಮತ್ತು ಇತ್ಯಾದಿ ಸೂಕ್ಷ್ಮ ಪ್ರದೇಶಗಳಲ್ಲಿ ಬಳಸುವುದನ್ನು ತಪ್ಪಿಸಿ ಎಂದು ಕರ್ನಾಟಕ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಮಹಾ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದೀಪಾವಳಿ ಶುಭಾಶಯ

ಬೆಂಗಳೂರು, ಅಕ್ಟೋಬರ್ 21 (ಕರ್ನಾಟಕ ವಾರ್ತೆ)

ದೀಪಾವಳಿ ಸಂದರ್ಭದಲ್ಲಿ ಜವಳಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಶ್ರೀ ಬಾಬುರಾವ್ ಚಿಂಚನಸೂರ ಅವರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಅವರು ದೀಪಗಳ ಹಬ್ಬವಾದ "ದೀಪಾವಳಿ" ಯು ಸರ್ವರ ಬಾಳಿನಲ್ಲಿ ಅಜ್ಞಾನವೆಂಬ ಕತ್ತಲನ್ನು ಕಳೆದು ಜ್ಞಾನವೆಂಬ ಬೆಳಕನ್ನು ತರಲಿ ಅವರಿಗೆ ಆರೋಗ್ಯ ಐಶ್ವರ್ಯಾದಿಗಳನ್ನು ನೀಡಲೆಂದು ಶುಭಕೋರುತ್ತೇನೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.